# ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

**ವಿಷಯ:** 2017-18ನೇ ಸಾಲಿನಲ್ಲಿ ರಾಜ್ಯದಲ್ಲಿರುವ ಮದರಸಗಳಿಗೆ ಆಧುನಿಕರಣ ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣ ನೀಡಲು ಅನುಧನ ಮಂಜೂರು ಮಾಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲುಡಿ 172 ಎಂಡಿಎಸ್ 2016, ದಿ: 03.01.2017 ಮತ್ತು ತಿದ್ದುಪಡಿ ಆದೇಶ ದಿ:27-01-2017.
2. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲುಡಿ 169 ಎಂಡಿಎಸ್ 2017, ದಿ: 06.04.2017.
3. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲುಡಿ 82 ಎಂಡಿಎಸ್ 2017, ದಿ: 18.08.2017.

<<<>>>

**ಪ್ರ ಸ್ತಾ ವ ನೆ:**

ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ 2016-17ನೇ ಸಾಲಿನಲ್ಲಿ ರಾಜ್ಯದಲ್ಲಿರುವ ಮದರಸಗಳಿಗೆ ಆಧುನಿಕರಣ, ಔಪಚಾರಿಕ ಮತ್ತು ಗಣಿಕೀಕೃತ ಶಿಕ್ಷಣ ನೀಡಲು ಅನುದಾನ ಮಂಜೂರು ಮಾಡುವ ಯೋಜನೆ ಕಾರ್ಯಕ್ರಮಗಳನ್ನು ಜಾರಿಗೊಳಿಸಲು ಉಲ್ಲೇಖಿತ (1) ರಲ್ಲಿ ಸರ್ಕಾರದ ಆದೇಶ ಹೊರಡಿಸಲಾಗಿದೆ.

ಉಲ್ಲೇಖಿತ (2)ರಲ್ಲಿ ಮದರಸದಲ್ಲಿ ಉತ್ತಮ ಗುಣವಟ್ಟದ ಶಿಕ್ಷವನ್ನು ಒದಗಿಸುವ ಸಲುವಾಗಿ (Providing quality Education in Madrasa) 2017-18ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ 2225-03-102-3-10(103) ಸರ್ಕಾರದಿಂದ ರೂ. 50.00 ಕೋಟಿ ಅನುದಾನವನ್ನು ನಿಗಧಿಪಡಿಸಲಾಗಿದ್ದು, ಅದರಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನ ರೂ. 12.50 ಕೋಟಿ ಬಿಡುಗಡೆ ಮಾಡಿ ಆದೇಶ ಹೊರಡಿಸಲಾಗಿದೆ.

ಅದರಂತೆ, ಜಿಲ್ಲೆಗಳಿಂದ ಸ್ವೀಕರಿಸಿದ ಪ್ರಸ್ತಾವೆನಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗಿತ್ತು. ಸದರಿ ಪ್ರಸ್ತಾವನೆಗಳನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಿ ಮೊದಲನೇ ಹಂತದಲ್ಲಿ ರಾಜ್ಯದ 14 ಜಿಲ್ಲೆಗಳಲ್ಲಿರುವ 98 ಮದರಸಗಳಿಗೆ ಆಧುನಿಕರಣ, ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣ ನೀಡಲು 2017-18ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ:2225-03-102-3-10(103) ರಡಿಯಲ್ಲಿ ಒದಗಿಸಿರುವ ಒಟ್ಟು ಅನುದಾನ ರೂ. 50.00 ಕೋಟಿಗಳ ಪೈಕಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನ ರೂ. 12.50 ಕೋಟಿ ಈಗಾಗಲೇ ಬಿಡುಗಡೆ ಮಾಡಲಾಗಿದ್ದು. ಸದರಿ ಅನುದಾನದಲ್ಲಿ ರೂ. 872.00 ಲಕ್ಷ (ಎಂಟು ಕೋಟಿ ಎಪ್ಪತ್ತೆರಡು ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು ಮಂಜೂರು ಮಾಡಿ ಉಲ್ಲೇಖ (3)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಬಿಡುಗಡೆ ಮಾಡಲಾಗಿದೆ.

ಸದರಿ ಅನುದಾನವನ್ನು ಸಂಬಂಧಪಟ್ಟ ಸಂಸ್ಥೆ/ಮದರಸಾಗಳಿಗೆ ಬಿಡುಗಡೆ ಮಾಡಲು ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಬಿಡುಗಡೆ ಮಾಡಲು ಉದ್ದೇಶಿಸಿ ಈ ಆದೇಶ.

# ಆದೇಶ

ಸಂಖ್ಯೆ:ಅಸಂನಿ/ಮದರಸಾ/ಸಿಆರ್-24/2017-18 ದಿನಾಂಕ: 20-09-2017

ಪ್ರಸ್ತಾವನಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಅನುಬಂಧದಲ್ಲಿ ಸೂಚಿಸಿರುವಂತೆ ಮೊದಲನೇ ಹಂತದಲ್ಲಿ ರಾಜ್ಯದ 14 ಜಿಲ್ಲೆಗಳಲ್ಲಿರುವ 98 ಮದರಸಗಳಿಗೆ ಆಧುನಿಕರಣ, ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣ ನೀಡಲು 2017-18ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ:2225-03-102-3-10(103) ರಡಿಯಲ್ಲಿ ರೂ. 872.00 ಲಕ್ಷ (ಎಂಟು ಕೋಟಿ ಎಪ್ಪತ್ತೆರಡು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಅನುದಾನವನ್ನು ಮಂಜೂರು ಮಾಡಿ ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರೆಗೆ ಈ ಕೆಳಕಂಡ ನಿಬಂಧನೆಗಳಿಗೊಳಪಟ್ಟು ಮರು ಬಿಡುಗಡೆ ಮಾಡಲಾಗಿದೆ.

ನಿಬಂಧನೆಗಳು:

1. ಸರ್ಕಾರಿ ಆದೇಶ ಸಂಖ್ಯೆ:ಎಂಡಬ್ಲುಡಿ 172 ಎಂಡಿಎಸ್ 2016, ದಿ: 03.01.2017 ಮತ್ತು ತಿದ್ದುಪಡಿ ಆದೇಶ ದಿ:27-01-2017ರ ಅನ್ವಯ ಅನುದಾನ ಬಿಡುಗಡೆಗೊಳಿಸುವುದು.
2. ಸದರಿ ಅನುದಾನವು ಒಂದು ಸಂಸ್ಥೆಗೆ ಕೇವಲ ಒಂದು ಬಾರಿ ಮಾತ್ರ ಪಡೆದುದೊಳ್ಳಲು ಅವಕಾಶವಿರುತ್ತದೆ. (One time Grants).
3. ಸಂಸ್ಥೆಗಳಿಗೆ ಅನುದಾನವನ್ನು ಸಂಬಂಧಪಟ್ಟ ಸಂಸ್ಥೆಯ ಮದರಸಾ/ಟ್ರಸ್ಟ್ ಅಥವಾ ಅಫಿಲಿಯಟೆಡ್ ಬ್ಯಾಂಚ್ ಆಗಿರುವಂತಹ ಸಂಸ್ಥೆಯ/ಮದರಸಾದ ಬ್ಯಾಂಕ್ ಖಾತೆಗೆ ಅನುದಾನವನ್ನು ನೇರವಾಗಿ ಬಿಡುಗಡೆ ಮಾಡುವುದು.
4. ಯಾವುದೇ ಕಾರಣಕ್ಕೂ ಅನುದಾನವನ್ನು ವೈಯಕ್ತಿಕ ಖಾತೆಗೆ ಜಮಾ ಮಾಡತಕ್ಕದ್ದಲ್ಲ.
5. ಮಂಜೂರಾದ ಅನುದಾನವನ್ನು ಅನುಬಂಧದ ಕಾಲಂ 7 ರಲ್ಲಿ ತಿಳಿಸಿರುವಂತೆ 2 ಕಂತುಗಳಲ್ಲಿ ಬಿಡುಗಡೆ ಮಾಡುವುದು.
6. ಅನುದಾನವನ್ನು ಅನುಬಂಧದ ಕಾಲಂ 5 ರಲ್ಲಿ ತಿಳಿಸಿರುವ ಉದ್ದೇಶಕ್ಕೆ ಮಾತ್ರ ಖರ್ಚು ಮಾಡುವುದು.
7. ಅನುಬಂಧ ಕಾಲಂ 9 ರಲ್ಲಿ ತಿಳಿಸಿರುವಂತೆ ಅಗತ್ಯ ಮೂಲಭೂತ ಸೌಕರ್ಯಕ್ಕೆ ಸಂಬಂಧಪಟ್ಟಂತೆ ಅಂದಾಜು ನಕ್ಷೆ/ ಅಂದಾಜು ವೆಚ್ಚದ ವಿವರಗಳನ್ನು ಅಧೀಕೃತ ಇಂಜನಿಯರ್ ರಿಂದ ಧೃಢೀಕರಿಸಿ ದಾಖಲೆಗಳನ್ನು ಪಡೆದು ಕಂಪ್ಯೂಟರ್ ಲ್ಯಾಬ್ ಕಟ್ಟಡಕ್ಕಾಗಿ ಹಾಗೂ ಮೂಲಭೂತ ಸೌಕರ್ಯಕ್ಕಾಗಿ ಅನುದಾನ ಬಿಡುಗಡೆ ಮಾಡುವುದು.
8. ಈ ಆದೇಶದನ್ವಯ ಒದಗಿಸಲಾಗಿರುವ ಅನುದಾನವನ್ನು ಅನುಬಂಧದಲ್ಲಿ ನಮೂದಿಸಿರುವ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು ಹಾಗೂ